**ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಮಂತ್ರಿಗಳು):** ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಹೆದ್ದಾರಿಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

**ಅಧ್ಯಕ್ಷರು:** *ವಿಧೇಯಕವನ್ನು ಮಂಡಿಸಲಾಗಿದೆ*.

## (ಊ) ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ, 1997

### ಮಂಡನೆಗೆ ಅನುಮತಿ ಕೋರಿಕೆ

*ಅನುಬಂಧ-V

**ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳ ಪರವಾಗಿ):** ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

**ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):** ಮಾನ್ಯ ಅಧ್ಯಕ್ಷರೆ, 1997ರ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

**ಅಧ್ಯಕ್ಷರು:** *ವಿಧೇಯಕವನ್ನು ಮಂಡಿಸಲಾಗಿದೆ*.

## (ಎ) ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 1997

### ಮಂಡನೆಗೆ ಅನುಮತಿ ಕೋರಿಕೆ

**ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) (ಡಾ।। ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಮಂತ್ರಿಗಳ ಪರವಾಗಿ):** ಮಾನ್ಯ ಅಧ್ಯಕ್ಷರೆ, 1997ರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

**ಅಧ್ಯಕ್ಷರು:** ಪ್ರಸ್ತಾವ ಏನೆಂದರೆ;

"1997ರ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು